KUVEMPU UNIVERSITY
Acc No. 142
Date 12/11/21
CLASSES & MINORITIES CELL

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆ ಜಾರಿಗೆ ತರುವ ಬಗ್ಗೆ.

**ಓದಲಾಗಿದೆ:** ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟದ ನಿರ್ಣಯ (ಪ್ರಕರಣ ಸಂಖ್ಯೆ: ಸಿ : 318/2021)

ಕುವೆಂಪು ವಿಶ್ವವಿದ್ಯಾಲಯ
08 NOV 2021
ಶಂಕರಘಟ್ಟ-577451
ಸಂ. 4184

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರುವ ಬಗ್ಗೆ ಚರ್ಚಿಸಲಾಯಿತು. ಅದರಂತೆ, ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣಕ್ಕೆ ಒತ್ತುಕೊಡಲು ಮತ್ತು ಪ್ರೋತ್ಸಾಹಿಸಲು ರೂಪಾಯಿ ಒಂದು ಸಾವಿರ ಕೋಟಿಗಳ ಹೆಚ್ಚುವರಿ ವೆಚ್ಚದಲ್ಲಿ ಒಂದು ಹೊಸ ಶಿಷ್ಯ ವೇತನ (Scholoarship) ಯೋಜನೆಯನ್ನು ಜಾರಿಗೆ ತರಲು ಸಚಿವ ಸಂಪುಟವು ನಿರ್ಧರಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ಬೆಂಗಳೂರು ದಿನಾಂಕ: 07.08.2021.**

ಮೇಲೆ ಹೇಳಿರುವ ಸಚಿವ ಸಂಪುಟದ ನಿರ್ಣಯದ ಹಿನ್ನೆಲೆಯಲ್ಲಿ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ (Scholarship) ಯೋಜನೆಯನ್ನು ಜಾರಿಗೆ ತರಲು ಯೋಜನೆಯ ರೂಪುರೇಷೆಗಳನ್ನು ರಚಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿಯನ್ನು ಪೂರ್ಣಗೊಳಿಸಿದ ನಂತರ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ, ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct Benefit Transfer - DBT) ಪದ್ಧತಿಯ ಮೂಲಕ 2021-22ನೇ ಆರ್ಥಿಕ ವರ್ಷದ ಸಾಲಿನಿಂದ ಜಾರಿಗೆ ಬರುವಂತೆ ಈ ಮುಂದಿನ ಪಟ್ಟಿಯಲ್ಲಿ ವಿವರಿಸಿರುವಂತೆ ಶಿಷ್ಯವೇತನದ ಹಣದ ಮೊತ್ತವನ್ನು ವಾರ್ಷಿಕ ಶಿಷ್ಯವೇತನ (Scholarship) ರೂಪದಲ್ಲಿ ಒದಗಿಸಲು ಮತ್ತು ಪಾವತಿಸಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

.....2

Registrar's
Personal Section
In No. 277
Date 8/11/2021

| ಕ್ರಮ ಸಂಖ್ಯೆ | ಕೋರ್ಸ್ ನ ಹೆಸರು / ಕೋರ್ಸ್ ನ ವಿಧಗಳು | ಹುಡುಗರು / ಪುರುಷರು | ಹುಡುಗಿಯರು / ಅನ್ಯ ಲಿಂಗದವರು |
|---|---|---|---|
| 1 | ಪದವಿಯ ಮುಂಚೆ ಪಿ.ಯು.ಸಿ / ಐ.ಟಿ.ಐ/ ಡಿಪ್ಲೋಮಾ | ರೂ. 2500/- | ರೂ. 3000/- |
| 2 | ಎಲ್ಲಾ ಬಿ.ಎ/ ಬಿ.ಎಸ್.ಸಿ/ ಬಿ.ಕಾಂ, ಇತ್ಯಾದಿ;<br>ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ವೃತ್ತಿಪರ ಕೋರ್ಸ್ ಗಳನ್ನು ಹೊರತುಪಡಿಸಿ. | ರೂ. 5000/- | ರೂ. 5500/- |
| 3 | ಎಲ್.ಎಲ್.ಬಿ/ ಪ್ಯಾರ ಮೆಡಿಕಲ್ / ಬಿ.ಫಾರ್ಮ್/ ನರ್ಸಿಂಗ್, ಇತ್ಯಾದಿ., ವೃತ್ತಿಪರ ಕೋರ್ಸ್ ಗಳು | ರೂ. 7500/- | ರೂ. 8000/- |
| 4 | ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್ ಗಳು | ರೂ. 10,000/- | ರೂ. 11,000/- |

<u>ಈ ಶಿಷ್ಯವೇತನಕ್ಕೆ ಈ ಕೆಳಕಂಡ ಅರ್ಥವಿವರಣೆಗಳನ್ನು ಪರಿಗಣಿಸತಕ್ಕದ್ದು:</u>

(ಅ) ರೈತ (Farmer), ಎಂದರೆ ರಾಜ್ಯದ ಯಾವುದೇ ಭಾಗದಲ್ಲಿ ಉಳುಮೆ ಮಾಡುವಂತಹ / ಕೃಷಿ ಮಾಡುವಂತಹ ಜಮೀನನ್ನು ತನ್ನ ಹೆಸರಿನಲ್ಲಿ ಹೊಂದಿರುವಂತಹ ವ್ಯಕ್ತಿ;

(ಆ) ಮಕ್ಕಳು, ಎಂದರೆ ಕಾನೂನಿನ ಪ್ರಕಾರ ದತ್ತು ಪಡೆದಿರುವ ಮಕ್ಕಳು ಸೇರಿದಂತೆ ಪೋಷಕ / ಪೋಷಕರ ಜೈವಿಕ ಸಂತತಿ. ಒಂದು ಪಕ್ಷ ಯಾವುದೇ ಮಕ್ಕಳಿಗೆ ಪೋಷಕ/ ಪೋಷಕರು ಇಲ್ಲದೆ ಇದ್ದ ಸಂದರ್ಭದಲ್ಲಿ ಉಳುಮೆ ಮಾಡುವಂತಹ / ಕೃಷಿ ಮಾಡುವಂತಹ ಜಮೀನನ್ನು ಅವರು ಹೊಂದಿರತಕ್ಕದ್ದು; ಈ ಷರತ್ತು, ಅವರುಗಳಿಗೆ ಈ ಯೋಜನೆಯ ಲಾಭವನ್ನು ಪಡೆಯಲು ಅನುಕೂಲವಾಗುತ್ತದೆ.

<u>ಈ ಶಿಷ್ಯವೇತನವು (Scholarship) ಈ ಮುಂದಿನ ಷರತ್ತುಗಳನ್ನು ಒಳಗೊಂಡಿರುತ್ತದೆ;</u>

i) ಈ ರೈತರ ಮಕ್ಕಳು ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ಶಿಷ್ಯವೇತನಕ್ಕೆ ಮಾತ್ರ ಅರ್ಹರಾಗುತ್ತಾರೆ. ಆದರೆ, ಮೆರಿಟ್, ಅರ್ಹತಾ ಪರೀಕ್ಷೆ, ಶೈಕ್ಷಣಿಕ ಪರೀಕ್ಷೆಗಳಲ್ಲಿ ರಾಂಕ್ ಇತ್ಯಾದಿಗಳ ಆಧಾರದ ಮೇಲೆ ಪಡೆಯುವ ಶಿಷ್ಯವೇತನ / ಪ್ರಶಸ್ತಿ (award)/ ಪ್ರತಿಫಲ (reward) – ಇವುಗಳನ್ನು ರೈತರ ಮಕ್ಕಳು ಪಡೆದಿದ್ದರೂ, ಈ ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ.

..3

ii) ರೈತರ ಮಕ್ಕಳ ತಂದೆ-ತಾಯಿ ಇಬ್ಬರೂ ಕೃಷಿ ಜಮೀನಿನ ಒಡೆಯರಾಗಿದ್ದರೆ, ಈ ಯೋಜನೆಯಲ್ಲಿ ಒಂದು ಶಿಷ್ಯವೇತನಕ್ಕೆ ಮಾತ್ರ ರೈತರ ಮಕ್ಕಳು ಅರ್ಹರಾಗಿರುತ್ತಾರೆ.

iii) ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್ / ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸ್‌ನ ಸೆಮೆಸ್ಟರ್‌ನಲ್ಲಿ / ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್ / ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನಃ ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ.

iv) ಈ ಶಿಷ್ಯವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸ್‌ಗೆ ನೀಡಲಾಗುವುದು. ಉದಾಹರಣೆಗೆ, "X ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ ಸ್ನಾತಕೋತ್ತರ ಕೋರ್ಸ್‌ಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ, ಈ ಕೋರ್ಸ್‌ಗೆ ಶಿಷ್ಯವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ.

ಈ ಆದೇಶವನ್ನು ದಿನಾಂಕ: 28-07-2021ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದನುಸಾರ (ಪ್ರಕರಣ ಸಂಖ್ಯೆ: ಸಿ: 318/2021) ಮತ್ತು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 92 ವೆಚ್ಚ-4/2021, ದಿನಾಂಕ: 06.08.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ರಫೀ ಅಹಮದ್ ಎಂ.ಎಸ್)**
ಸರ್ಕಾರದ ಜಂಟಿ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇದನ್ನು ಇ-ವಿಶೇಷ ಗೆಜೆಟ್ ನಲ್ಲಿ ಹೊರಡಿಸಲು ಕೋರಿದೆ.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

..4

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಸರ್ಕಾರದ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರು.
8. ಕುಲಪತಿಗಳು, ರಾಜ್ಯದ ಎಲ್ಲಾ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು/ ಕೃಷಿ ಪೂರಕ ವಿಜ್ಞಾನಗಳ ವಿಶ್ವವಿದ್ಯಾಲಯಗಳು.
9. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
10. ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು,
12. ಎಲ್ಲಾ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
13. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ (ಪ್ರಕರಣ ಸಂಖ್ಯೆ: ಸಿ : 318/2021), ವಿಧಾನಸೌಧ, ಬೆಂಗಳೂರು.
14. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
15. ಯೋಜನಾ ನಿರ್ದೇಶಕರು, ನೇರ ನಗದು ವರ್ಗಾವಣೆ ಕೋಶ (Direct Benefit Transfer – DBT Cell), ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
16. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ- ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಶಾಖಾರಕ್ಷಾ ಕಡತ/ ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿ.

*****